**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಹಾಸನ ವಿಧಾನಸಭಾ ಕ್ಷೇತ್ರದ ಗ್ರಾಮೀಣ ಭಾಗದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ಮಾಣಕ್ಕಾಗಿ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. RDPR ಇ-ಆಫೀಸ್ ಕಡತ ಸಂಖ್ಯೆ: RDPR/56/RRC/2022-RDPR-SUV-RDPR SEC-Part(24) (Computr No. 697205)
2. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ರವರ ಪತ್ರ ಸಂ. ಗ್ರಾಕುನೀ&ನೈಇ/06/ಗ್ರಾನೀಸ(4)/2020/1316 ದಿನಾಂಕ 07/12/2020

---

**ಪೀಠಿಕೆ:**

ಮೇಲೆ(1)ರಲ್ಲಿ ಓದಲಾದ ಕಡತದಲ್ಲಿ ಮಾನ್ಯ ಶಾಸಕರು, ಹಾಸನ ವಿಧಾನಸಭಾ ಕ್ಷೇತ್ರ ರವರು ಮಾನ್ಯ ಮುಖ್ಯಮಂತ್ರಿಗಳನ್ನು ಹಾಸನ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಅಭಿವೃದ್ಧಿ ಕಾರ್ಯಗಳಿಗೆ ವಿಶೇಷ ಅನುದಾನ ಬಿಡುಗಡೆ ಮಾಡುವಂತೆ ಕೋರಿರುವ ಮೇರೆಗೆ ಮಾನ್ಯ ಮುಖ್ಯ ಮಂತ್ರಿಗಳು ರೂ.13.00ಕೋಟಿಗಳ ಅನುದಾನವನ್ನು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಅಡಿಯಲ್ಲಿ ಒದಗಿಸಲು ಅನುಮೋದಿಸಿರುತ್ತಾರೆ. ಅದರಂತೆ ಲೆಕ್ಕ ಶೀರ್ಷಿಕೆ 5054ರಡಿ ರೂ.13.00ಕೋಟಿಗಳ ಮೊತ್ತಕ್ಕೆ ಕಾಮಗಾರಿಗಳನ್ನು ಕೈಗೊಳ್ಳಲು ಆರ್ಥಿಕ ಇಲಾಖೆಯು ಕೆಲವು ಷರತ್ತುಗಳನ್ನು ಒಳಗೊಂಡಂತೆ ಕೈಗೊಳ್ಳಲು ಅನಧಿಕೃತ ಟಿಪ್ಪಣಿ ಸಂಖ್ಯೆ ಆಇ 48 ವೆಚ್ಚ-6 2022 ದಿನಾಂಕ 24.01.2022ರಲ್ಲಿ ಸಹಮತಿಸಿದೆ.

ಹಾಸನ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಅಭಿವೃದ್ಧಿ ಕಾಮಗಾರಿಗಳ ಪೈಕಿ 5 ಕಾಮಗಾರಿಗಳು ರಸ್ತೆ, ಒಳಚರಂಡಿ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗಳಾಗಿದ್ದು, ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದ್ದು, 6ನೇ ಕಾಮಗಾರಿಯಾದ ರೂ.475.00ಲಕ್ಷಗಳ ಅಂದಾಜು ಮೊತ್ತದ ಹಾಸನ ವಿಧಾನಸಭಾ ಕ್ಷೇತ್ರದ ಗ್ರಾಮೀಣ ಭಾಗದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ಮಾಣ ಕಾಮಗಾರಿಯನ್ನು ಲೆಕ್ಕ ಶೀರ್ಷಿಕೆ 5054ರಡಿ ಕೈಗೊಳ್ಳಲು ಸಾಧ್ಯವಿರುವುದಿಲ್ಲವಾದ್ದರಿಂದ ಲೆಕ್ಕ ಶೀರ್ಷಿಕೆ 4215ರಡಿ ಮಂಜೂರು ಮಾಡಲು ಮತ್ತೊಮ್ಮೆ ಆರ್ಥಿಕ ಇಲಾಖೆಯನ್ನು ಕೋರಲಾಗಿದೆ. ಆರ್ಥಿಕ ಇಲಾಖೆಯು 2021-22ನೇ ಸಾಲಿನಲ್ಲಿ ಹಾಸನ ವಿಧಾನಸಭಾ ಕ್ಷೇತ್ರಕ್ಕೆ ಲೆಕ್ಕ ಶೀರ್ಷಿಕೆ 5054ರಡಿ ಹಂಚಿಕೆ ಮಾಡಿದ ರೂ.13.00ಕೋಟಿ ಮೊತ್ತದಲ್ಲಿ ರೂ.475.00ಲಕ್ಷಗಳ ಕಾಮಗಾರಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಲೆಕ್ಕ ಶೀರ್ಷಿಕೆ 4215-ಜಲಧಾರೆ ಅಡಿಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಟಿಪ್ಪಣಿ ಸಂಖ್ಯೆ ಆಇ 241 ವೆಚ್ಚ 06 2022 ದಿನಾಂಕ 29.03.2022ರಲ್ಲಿ ಸಹಮತಿ ನೀಡಿದೆ.

ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ **ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾಸನ ಹಾಗೂ ಮುಖ್ಯ ಇಂಜಿನಿಯರ್,** ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ ರಾಜ್ಯ ವಲಯದ 4215ರಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ/217/ಗ್ರಾನೀಸ(4)2022 ಬೆಂಗಳೂರು, ದಿನಾಂಕ:31.03.2022.** 405

ಪೀಠಿಕೆಯಲ್ಲಿನ ಅಂಶಗಳ ಹಿನ್ನೆಲೆಯಲ್ಲಿ, ಹಾಸನ ವಿಧಾನಸಭಾ ಕ್ಷೇತ್ರದ ಗ್ರಾಮೀಣ ಭಾಗದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ಮಾಣಕ್ಕಾಗಿ ಅಂದಾಜು ಮೊತ್ತ **ರೂ.475.00ಲಕ್ಷ (ನಾಲ್ಕು ನೂರ ಎಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ)**ಗಳಿಗೆ ರಾಜ್ಯ ವಲಯದ 4215 ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2. ಈ ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗ ಕೆಳಕಂಡ ಷರತ್ತುಗಳಿಗೊಳಪಟ್ಟಿರುತ್ತದೆ;**

(ಅ) ಮೇಲೆ ಓದಲಾದ (2)ರ ಪತ್ರದಲ್ಲಿರುವ ಷರತ್ತುಗಳನ್ವಯ ಚೆಕ್‌ಲಿಸ್ಟ್‌ನಂತೆ ಪರಿಶೀಲಿಸಿ ಕಾಮಗಾರಿಗೆ ಅನುಮೋದನೆ ಪಡೆಯತಕ್ಕದ್ದು.

(ಆ) ಈ ಅನುಮೋದಿತ ಕಾಮಗಾರಿಯು ಗ್ರಾಮೀಣ ಪ್ರದೇಶದ ಜನವಸತಿಗಳಿಗೆ ಮಾತ್ರ ಅನ್ವಯಿಸತಕ್ಕದ್ದು ಮತ್ತು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಸೇರ್ಪಡೆಗೊಳಿಸುವುದಕ್ಕೆ ಕ್ರಮ ಜರುಗಿಸತಕ್ಕದ್ದು.

(ಇ) ಯೋಜನಾ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಕಾಯಿದೆಯನ್ವಯ) ನೀತಿಯನ್ವಯವೇ ಮಾಡತಕ್ಕದ್ದು.

(ಈ) ಗುತ್ತಿಗೆದಾರರು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ 5 ವರ್ಷಗಳ ಕಾಲ ಕಾಮಗಾರಿಗಳ ಸಂಪೂರ್ಣ ನಿರ್ವಹಣೆ ಮತ್ತು ಕಾರ್ಯಾಚರಣೆಯನ್ನು ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

(ಉ) ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/RDWSD ರವರು ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ.

(ಊ) ಯೋಜನೆ ಅನುಷ್ಠಾನಗೊಂಡು ಗುತ್ತಿಗೆದಾರರ 5 ವರ್ಷಗಳ O&M ನಿರ್ವಹಣಾ ಅವಧಿ ಮುಗಿದ ನಂತರ ಯೋಜನೆಯ ಕಾರ್ಯಾಚರಣೆ ಮತ್ತು ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾಡಿಸಬೇಕು. ಗ್ರಾಮ ಪಂಚಾಯತ್ ಇಚ್ಛಿಸಿದ್ದಲ್ಲಿ ಸದರಿ ಘಟಕವನ್ನು ಗ್ರಾಮ ಪಂಚಾಯತ್‌ನಿಂದ ನಿರ್ವಹಿಸಲು ಹಸ್ತಾಂತರಿಸುವುದು. ಇಲ್ಲವಾದಲ್ಲಿ ಸಮಯಕ್ಕೆ ಮುಂಚಿತವಾಗಿ O&M ಗುತ್ತಿಗೆದಾರರನ್ನು ನೇಮಿಸಲು ಕ್ರಮ ತೆಗೆದುಕೊಳ್ಳತಕ್ಕದ್ದು.

3. ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂ:ಆಇ 241 ವೆಚ್ಚ 06 2022 ದಿನಾಂಕ 29.03.2022ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ (ಅಭಿವೃದ್ಧಿ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಹಾಸನ**.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಆಯುಕ್ತರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
7. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.

8. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಹಾಸನ**
10. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&ನೈ. ವೃತ್ತ ಕಛೇರಿ, **ಮೈಸೂರು**.
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. &. ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಸಂಪಾದಕರು, **"ಕರ್ನಾಟಕ ವಿಕಾಸ"**, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
14. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಹಾಸನ**.
15. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ. &. ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು). ಬಹುಮಹಡಿ ಕಟ್ಟಡ, ಬೆಂಗಳೂರು.
16. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ), ಬೆಂಗಳೂರು.
17. ಗ್ರಾ.ಅ. &. ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು), ಬಹುಮಹಡಿ ಕಟ್ಟಡ, ಬೆಂಗಳೂರು.
18. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.